**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 235 ವೆಚ್ಚ-11/2020

ಕರ್ನಾಟಕ ಸರ್ಕಾರದ ಸಚಿವಾಲಯ,
ಆರ್ಥಿಕ ಇಲಾಖೆ,
ಬೆಂಗಳೂರು, ದಿನಾಂಕ: 29.09.2020

**ಸೇರ್ಪಡೆ ಆದೇಶ**

**ವಿಷಯ:** ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಸಂಬಂಧ ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಮತ್ತು ಕರ್ತವ್ಯ ನಿರತ ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ವೃಂದದ ಸರ್ಕಾರಿ ನೌಕರರು ಸೋಂಕಿನಿಂದ ನಿಧನರಾದ ಸಂದರ್ಭದಲ್ಲಿ ವಿಮಾ-ಪರಿಹಾರ ಮೊತ್ತವನ್ನು ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಆಇ 190 ವೆಚ್ಚ-11/2020, ದಿನಾಂಕ: 07.08.2020

*****

ಮೇಲ್ಕಂಡ ಉಲ್ಲೇಖದಲ್ಲಿನ ಆದೇಶದಲ್ಲಿ ಮಂಜೂರು ಮಾಡಿರುವ ರೂ.30.00 ಲಕ್ಷಗಳ ಪರಿಹಾರ ಮೊತ್ತವನ್ನು ರಾಜ್ಯದ ಅನುದಾನಿತ ಶಾಲಾ ಶಿಕ್ಷಕರಿಗೂ ವಿಸ್ತರಿಸಲಾಗಿದೆ. ಅನುದಾನಿತ ಶಾಲಾ ಶಿಕ್ಷಕರು, ಯಾರು Covid-19 ಕಾರ್ಯದಲ್ಲಿ ಪಾಲ್ಗೊಂಡಿರುತ್ತಾರೋ, ಅವರು ಮೃತರಾದಲ್ಲಿ ಪರಿಹಾರ ವಿತರಣೆಗೆ ಸಂಬಂಧಪಟ್ಟ ಪ್ರಸ್ತಾವನೆಯನ್ನು ಸಕ್ಷಮ ಪ್ರಾಧಿಕಾರದಿಂದ (ಅಂದರೆ, ಇಲಾಖಾ ಮುಖ್ಯಸ್ಥರು, ಸಂಬಂಧ ಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು, ಅಥವಾ ಆಯುಕ್ತರು, ಬಿಬಿಎಂಪಿ) ಕೋವಿಡ್-19 ಕರ್ತವ್ಯಕ್ಕಾಗಿ ನಿಯೋಜಿಸಲ್ಪಟ್ಟ ಆದೇಶದ ಪ್ರತಿಯಿದ್ದಲ್ಲಿ ಮಾತ್ರ ಪರಿಗಣಿಸಬಹುದು ಎಂದು ಸೂಚಿಸಲಾಗಿದೆ.

(ಮಾನ್ಯ ಮುಖ್ಯಮಂತ್ರಿಗಳಿಂದ ಅನುಮೋದಿಸಲ್ಪಟ್ಟಿದೆ)

**(ಪುರುಷೋತ್ತಮ್ ಸಿಂಗ್ ಬಿ.ಹೆಚ್)**
ವಿಶೇಷಾಧಿಕಾರಿ (ಜಿ.ಪಂ) ಮತ್ತು ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ ,ಬೆಂಗಳೂರು
3. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.